ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದ ನಿರ್ವಹಣೆ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

372 (475) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರದಲ್ಲಿರುವ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣವನ್ನು ಸೂಕ್ತ ನಿರ್ವಹಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಕ್ರೀಡಾಂಗಣದ, ಒಳಾಂಗಣ ಹಾಗೂ ಹೊರಾಂಗಣದ ಸುಸಜ್ಜಿತ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಿಂದ ಸರ್ಕಾರ ಇನ್ನೂ ಹೆಚ್ಚು ಅನುದಾನ ನೀಡಿ, ಸೂಕ್ತ ನಿರ್ವಹಣೆ ಮಾಡಲು ಕ್ರಮ ಕೈಗೊಳ್ಳುವುದೇ?